AT
Std-VI

Inner cover (front)

## ಪ್ರತಿಜ್ಞೆ

ಭಾರತವು ನನ್ನ ದೇಶ. ಭಾರತೀಯರೆಲ್ಲರೂ ನನ್ನ ಸಹೋದರ, ಸಹೋದರಿಯರು.

ನಾನು ನನ್ನ ದೇಶವನ್ನು ಪ್ರೀತಿಸುತ್ತೇನೆ. ಅದರ ಸಂಪನ್ನ ಹಾಗು ವೈವಿಧ್ಯಪೂರ್ಣವಾದ ಪರಂಪರೆಗೆ ನಾನು ಹೆಮ್ಮೆಪಡುತ್ತೇನೆ.

ನಾನು ನನ್ನ ತಂದೆ, ತಾಯಿ ಮತ್ತು ಗುರುಹಿರಿಯರನ್ನು ಗೌರವಿಸುತ್ತೇನೆ ಮತ್ತು ಎಲ್ಲರೊಡನೆ ಸೌಜನ್ಯದಿಂದ ವರ್ತಿಸುತ್ತೇನೆ.

ನಾನು ನನ್ನ ದೇಶ ಮತ್ತು ನನ್ನ ದೇಶದ ಜನರಿಗೆ ನನ್ನ ಶ್ರದ್ಧೆಯನ್ನು ಮುಡಿಪಾಗಿಡುತ್ತೇನೆ. ಅವರ ಕ್ಷೇಮ ಮತ್ತು ಸಮೃದ್ಧಿಯಲ್ಲೇ ನನ್ನ ಆನಂದವಿದೆ.

Inner cover (back)

# ಭಾರತದ ಸಂವಿಧಾನ

ಭಾಗ 4(ಕ)

## ಮೂಲಭೂತ ಕರ್ತವ್ಯಗಳು

**51ಕ. ಮೂಲಭೂತ ಕರ್ತವ್ಯಗಳು – ಈ ಕೆಳಗಿನವುಗಳು ಭಾರತದ ಪ್ರತಿಯೊಬ್ಬ ಪೌರನ ಕರ್ತವ್ಯಗಳಾಗಿವೆ. –**

(ಕ) ಸಂವಿಧಾನವನ್ನು ಅನುಸರಿಸುವುದು, ಅದರ ಆದರ್ಶಗಳನ್ನು ಮತ್ತು ಸಂಸ್ಥೆಗಳನ್ನು, ರಾಷ್ಟ್ರಧ್ವಜ ಮತ್ತು ರಾಷ್ಟ್ರಗೀತೆಯನ್ನು ಗೌರವಿಸುವುದು;

(ಖ) ನಮ್ಮ ರಾಷ್ಟ್ರೀಯ ಸ್ವಾತಂತ್ರ್ಯ ಸಂಗ್ರಾಮಕ್ಕೆ ಸ್ಫೂರ್ತಿದಾಯಕವಾದ ಉದಾತ್ತ ಆದರ್ಶಗಳನ್ನು ಪೋಷಿಸುವುದು ಮತ್ತು ಅನುಸರಿಸುವುದು.

(ಗ) ಭಾರತದ ಸಾರ್ವಭೌಮತೆಯನ್ನು, ಏಕತೆಯನ್ನು ಮತ್ತು ಅಖಂಡತೆಯನ್ನು ಎತ್ತಿ ಹಿಡಿಯುವುದು ಹಾಗೂ ಸಂರಕ್ಷಿಸುವುದು.

(ಘ) ದೇಶವನ್ನು ರಕ್ಷಿಸಲು ಮತ್ತು ರಾಷ್ಟ್ರಕ್ಕೆ ಸೇವೆ ಸಲ್ಲಿಸಲು ಕರೆ ಬಂದಾಗ, ಹಾಗೆ ಮಾಡುವುದು.

(ಙ) ಧಾರ್ಮಿಕ, ಭಾಷಿಕ ಮತ್ತು ಪ್ರಾದೇಶಿಕ ಅಥವಾ ಜಾತಿ ಪಂಗಡಗಳ ಭಿನ್ನತೆಗಳಿಗೆ ಅತೀತವಾಗಿ ಭಾರತದ ಎಲ್ಲ ಜನತೆಯಲ್ಲಿ ಸಾಮರಸ್ಯವನ್ನು ಮತ್ತು ಸಮಾನ ಭ್ರಾತೃತ್ವದ ಭಾವನೆಯನ್ನು ಬೆಳೆಸುವುದು, ಸ್ತ್ರೀಯರ ಗೌರವಕ್ಕೆ ಕುಂದುಂಟುಮಾಡುವ ಆಚರಣೆಯನ್ನು ಬಿಟ್ಟು ಬಿಡುವುದು.

(ಚ) ನಮ್ಮ ಸಮ್ಮಿಶ್ರ ಸಂಸ್ಕೃತಿಯ ಭವ್ಯ ಪರಂಪರೆಯನ್ನು ಗೌರವಿಸುವುದು ಹಾಗೂ ಕಾಪಾಡುವುದು.

(ಛ) ಅರಣ್ಯಗಳು, ಸರೋವರಗಳು, ನದಿಗಳು ಮತ್ತು ವನ್ಯಜೀವಿಗಳು ಸೇರಿದಂತೆ ನೈಸರ್ಗಿಕ ಪರಿಸರವನ್ನು ಸಂರಕ್ಷಿಸುವುದು ಹಾಗೂ ಅಭಿವೃದ್ಧಿ ಮಾಡುವುದು, ಪ್ರಾಣಿಗಳಿಗೆ ಅನುಕಂಪ ತೋರಿಸುವುದು.

(ಜ) ವೈಜ್ಞಾನಿಕ ಮನೋಭಾವ, ಮಾನವೀಯತೆ, ಜಿಜ್ಞಾಸೆ ಮತ್ತು ಸುಧಾರಣಾ ಪ್ರವೃತ್ತಿಯನ್ನು ಅಭಿವೃದ್ಧಿಗೊಳಿಸುವುದು.

(ಝ) ಸಾರ್ವಜನಿಕ ಸೊತ್ತನ್ನು ರಕ್ಷಿಸುವುದು ಮತ್ತು ಹಿಂಸೆಯನ್ನು ತ್ಯಜಿಸುವುದು.

(ಞ) ರಾಷ್ಟ್ರವು ನಿರಂತರವಾಗಿ ಸಾಧನೆ ಮತ್ತು ಸಿದ್ಧಿಯ ಔನ್ನತ್ಯಕ್ಕೆ ತಲುಪಲು ವೈಯಕ್ತಿಕ ಹಾಗೂ ಸಾಮಾಜಿಕ ಚಟುವಟಿಕೆಯ ಎಲ್ಲ ಕಾರ್ಯಕ್ಷೇತ್ರಗಳಲ್ಲಿ ಸಮರ್ಪಕವಾಗಿ ಶ್ರಮಿಸುವುದು.